CW.12 PW.5

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ., ಕನಕಪುರ ರವರ ನ್ಯಾಯಾಲಯದಲ್ಲಿ**

# CC No.1044/2021

| | |
|---|---|
| ಸಾಕ್ಷಿದಾರರ ಹೆಸರು | ಮಲ್ಲೇಶ್ |
| ತಂದೆಯ ಹೆಸರು | ವಿ. ಕೃಷ್ಣಪ್ಪ |
| ವಯಸ್ಸು | 46 ವರ್ಷ |
| ವೃತ್ತಿ | ಪಿ.ಐ ಹಾರೋಹಳ್ಳಿ |
| ವಿಳಾಸ | ಹಾರೋಹಳ್ಳಿ |
| ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ | 18.03.2026 |

**ಮುಖ್ಯ ವಿಚಾರಣೆ ಎ ಪಿ ಪಿ ರವರಿಂದಃ-**

ಆರೋಪಿಯನ್ನು ನಾನು ನೋಡಿರುತ್ತೇನೆ. ಈ ದಿನ ನ್ಯಾಯಾಲಯದಲ್ಲಿ ಹಾಜರಿರುತ್ತಾರೆ.

ನಾನು ಜುಲೈ 2017 ರಿಂದ ನವೆಂಬರ್ 2019 ರವರೆಗೆ ಸಿ ಪಿ ಐ ಆಗಿ ಕನಕಪುರ ವೃತ್ತ ಕಚೇರಿಯಲ್ಲಿ ನನ್ನ ಕರ್ತವ್ಯವನ್ನು ನಿರ್ವಹಿಸುತ್ತಿದ್ದೇನೆ. ಕೋಡಿಹಳ್ಳಿ ಠಾಣೆ ನನ್ನ ವ್ಯಾಪ್ತಿಗೆ ಬರುತ್ತಿತ್ತು.

ದಿಃ12.09.2018 ರಂದು ಪ್ರಕರಣದ ಕಡತವನ್ನು ಚಾಸಾ-11 ರವರಿಂದ ಪಡೆದುಕೊಂಡು ತನಿಖೆಯನ್ನು ಮುಂದುವರಿಸಿರುತ್ತೇನೆ. ಸದರಿ ದಿನ ಜಪ್ತು ಪಡಿಸಿದ ವಾಹನದ ಮಾಲೀಕರಾದ ಆರೋಪಿಗೆ ಐಎಂವಿ ಕಾಯ್ದೆ ಕಲಂ 133 ಅಡಿಯಲ್ಲಿ ನೋಟೀಸು ಜಾರಿ ಮಾಡಿದ್ದು ಪ್ರತ್ಯುತ್ತರವನ್ನು ಪಡೆದುಕೊಂಡಿರುತ್ತೇನೆ. ನಂತರ ಆರೋಪಿಯ ದಸ್ತಗಿರಿ ನಿಯಾವಳಿಯನ್ನು ಪಾಲಿಸಿ ಸೂಕ್ತ ಜಾಮೀನಿನ ಮೇರೆಗೆ ಬಿಡುಗಡೆ ಮಾಡಲಾಯಿತು. ಅದೇ ದಿನ ಚಾಸಾ-1 ರವರ ಮುಂದುವರಿದ ಹೇಳಿಕೆ ಪಡೆದಿರುತ್ತೇನೆ.

ದಿಃ23.09.2018 ರಂದು ಚಾಸಾ-10 ರವರಿಗೆ ಪಿಎಂ ವರದಿಯನ್ನು ಸ್ವೀಕರಿಸಿರುತ್ತೇನೆ. ಅದೇ ದಿನ ಆರೋಪಿಯಿಂದ ಸೂಕ್ತ ಇಂಡಿನಿಟಿ ಬಾಂಡ್ ನ್ನು ಪಡೆದುಕೊಂಡು ವಾಹನವನ್ನು ಬಿಡುಗಡೆ ಮಾಡಿರುತ್ತೇನೆ. ದಿಃ10.01.2019 ರಂದು ಚಾಸಾ-9 ರವರಿಂದ ಐಎಂವಿ ವರದಿಯನ್ನು ಪಡೆದುಕೊಂಡಿರುತ್ತೇನೆ. ಆರೋಪಿಯ ವಿರುದ್ದ ಆರೋಪ ಸಾಬೀತಾದ ಕಾರಣ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ಸಾಕ್ಷಿಗೆ ಸದರಿ ಪ್ರಕರಣದ ಚಾಸಾ-1 ರವರ ಹೇಳಿಕೆಯ ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಸದರಿ ಪ್ರಕರಣದ ಪಿಎಂ ವರದಿಯನ್ನು ತೋರಿಸಲಾಗಿ ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-6 ಎಂದು ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಸದರಿ ಪ್ರಕರಣದ ಐ ಎಂ ವಿ ವರದಿಯನ್ನು ತೋರಿಸಲಾಗಿ ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-7 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಸದರಿ ಪ್ರಕರಣದಲ್ಲಿ ವಾಹನದ ಮಾಲೀಕರಿಗೆ ನೀಡಿರುವ ನೊಟೀಸ್ ಹಾಗೂ ಅದರ ಪ್ರತ್ಯುತ್ತರ ಮತ್ತು ಇಂಡಿನಿಟಿ ಬಾಂಡ್ ದಾಖಲಾತಿಗಳನ್ನು ತೋರಿಸಲಾಗಿ ಸಾಕ್ಷಿಯು ನೋಡಿ ಗುರುತಿಸಿದ್ದು ಸದರಿ ದಾಖಲಾತಿಗಳನ್ನು ಕ್ರಮವಾಗಿ ಈಗ ನಿಪಿ-9 ರಿಂದ 11 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಗಳನ್ನು ನಿಪಿ-9(ಎ) ರಿಂದ 11(ಎ) ಎಂದು ಕ್ರಮವಾಗಿ ಗುರುತಿಸಲಾಯಿತು.

ಸಾಕ್ಷಿಗೆ ಸದರಿ ಪ್ರಕರಣದ ಕಚ್ಚಾ ನಕಾಶೆಯ ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ಈಗ ನಿಪಿ-12 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ**

ನಾನು ಹೇಳಿದಂತೆ ಅಪಘಾತಕ್ಕೆ ಸಂಬಂಧಿಸಿದಂತೆ ಯಾವುದೇ ವಾಹನವನ್ನು ಅಮಾನತು ಪಡಿಸಿಕೊಂಡಿಲ್ಲ ಹಾಗೂ ಸ್ಥಳದಲ್ಲಿ ಯಾವುದೇ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ಅಮಾನತು ಪಂಚನಾಮೆಗೆ ಯಾವುದೇ ಸಾಕ್ಷಿದಾರರ ಸಹಿ ಪಡೆದಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ನಾನು ಐಎಂವಿ ವರದಿಯನ್ನು ಚಾಸಾ-9 ರವರಿಂದ ಪಡೆದಿಲ್ಲ ಎಂದರೆ ಸರಿಯಲ್ಲ. ಅಪಘಾತ ಪಡಿಸಿದ ವಾಹನ ಎಂದು ಹೇಳಿದ್ದು ಇದಕ್ಕೆ ಸಂಬಂಧಿಸಿದಂತೆ ಯಾವುದೇ ದಾಖಲೆ ಪಡೆದಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ಚಾಸಾ-1 ರವರ ಯಾವುದೇ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಆರೋಪಿಯ ತಪ್ಪಿ ನಿಂದ ಯಾವುದೇ ಅಪಘಾತವಾಗಿಲ್ಲ ಎಂದರೆ ಸರಿಯಲ್ಲ. ಕೇವಲ ಮೃತನ ಕುಟುಂಬಕ್ಕೆ ಪರಿಹಾರ ಹಣ ಬರಲಿ ಎಂದು ಸುಳ್ಳು ವರದಿ ನೀಡಿ ಸುಳ್ಳು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ** **ಓ ಹೇ ಕೇ ಸರಿ ಇದೆ**

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,**

**ಕನಕಪುರ .**